● **ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ ಇವರು ನಿಯಮ 330 ರಡಿ ಪ್ರಸ್ತಾಪಿಸಿರುವ ಸೂಚನೆ.**

**ವಿಷಯ**

ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿನ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ತುಂಬಲು ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ದಿನಾಂಕ:30-09-2021 ರಂದು ಒಟ್ಟು 1242 ಸಹಾಯಕ ಪ್ರಾಧ್ಯಾಪಕರ ಹುದ್ದೆಗಳಿಗೆ ನೇಮಕಾತಿಗಾಗಿ ಅಧಿಸೂಚನೆ ಹೊರಡಿಸಿದ್ದು, ಅದರಲ್ಲಿ 1209 ಅಭ್ಯರ್ಥಿಗಳು ಆಯ್ಕೆಗೊಂಡಿರುತ್ತಾರೆ. ಆದರೆ, ಸದರಿಯವರಿಗೆ ಇದುವರೆವಿಗೂ ನೇಮಕಾತಿ ಆದೇಶ ನೀಡದೆ ಇರುವುದರಿಂದ ಆತಂಕದಲ್ಲಿದ್ದು, ಜೀವನ ನಿರ್ವಹಣೆ ಕಷ್ಟಸಾಧ್ಯವಾಗಿರುತ್ತದೆ. ಪ್ರಸ್ತುತ ಉನ್ನತ ಶಿಕ್ಷಣ ಇಲಾಖೆಯಲ್ಲಿ ಬೋಧಕರ ಕೊರತೆ ಇದ್ದು, ಶೈಕ್ಷಣಿಕ ಚಟುವಟಿಕೆಗಳಿಗೆ ತುಂಬಾ ಅಡ್ಡಿ ಉಂಟಾಗುತ್ತಿದೆ. ಆಯ್ಕೆಯಾದ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡದೆ ಇರುವುದರಿಂದ ಉಂಟಾಗಿರುವ ಗಂಭೀರ ಸಮಸ್ಯೆ ಕುರಿತು.

**ಉತ್ತರ**

ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ 257 ಡಿಸಿಇ 2019, ದಿನಾಂಕ:26-08-2021 ರನ್ವಯ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಸಹಾಯಕ ಪ್ರಾಧ್ಯಾಪಕರ ಹುದ್ದೆಗಳ ನೇರ ನೇಮಕಾತಿಗಾಗಿ ದಿನಾಂಕ:12-03-2022 ರಿಂದ 16-03-2022 ರವರೆಗೆ ಪರೀಕ್ಷೆಗಳನ್ನು ನಡೆಸಿರುತ್ತದೆ. ತದನಂತರ 1:3 ಅನುಪಾತದಲ್ಲಿ ಅಭ್ಯರ್ಥಿಗಳು ಗಳಿಸಿರುವ ಅಂಕಗಳ ಆಧಾರದ ಮೇಲೆ ಮೂಲ ದಾಖಲೆಗಳ ಪರಿಶೀಲನೆಯನ್ನು ದಿನಾಂಕ:05-11-2022 ರಿಂದ 08-02-2023 ರವರೆಗೆ ನಡೆಸಿ ಪೂರ್ಣಗೊಳಿಸಲಾಯಿತು. ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ದಿನಾಂಕ: 30-01-2023 ರಂದು ಪ್ರಕಟಿಸಿ ಆಕ್ಷೇಪಣೆಗಳನ್ನು ಸಲ್ಲಿಸಲು ಅವಕಾಶ ನೀಡಲಾಗಿತ್ತು.

ಸರ್ಕಾರದ ಸುತ್ತೋಲೆ ಸಂಖ್ಯೆ:ಸಿಆಸುಇ/03/ಹೈಕಕೋ/2019, ದಿನಾಂಕ:01-02-2023 ರ ಅನುಸಾರ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಪರಿಷ್ಕರಿಸಿ ದಿನಾಂಕ:17-02-2023 ಮತ್ತು 22-02-2023 ರಂದು ಪ್ರಕಟಿಸಿ ಆಕ್ಷೇಪಣೆಗಳನ್ನು ಆಹ್ವಾನಿಸಲಾಗಿದೆ. ಸ್ವೀಕೃತವಾದ ಆಕ್ಷೇಪಣೆಗಳನ್ನು ಪರಿಶೀಲಿಸಿ ದಿನಾಂಕ:03-03-2023 ರಂದು ಅಂತಿಮ ಆಯ್ಕೆ ಪಟ್ಟಿಯನ್ನು ಪ್ರಕಟಿಸಿ ಸಲ್ಲಿಸಿರುತ್ತಾರೆ

ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಪರಿಷ್ಕರಿಸಿದಾಗ ಈ ಹಿಂದೆ ಆಯ್ಕೆಯಾಗಿದ್ದ ಸುಮಾರು 42 ಉಳಿಕೆ ಮೂಲ ವೃಂದದ ಅಭ್ಯರ್ಥಿಗಳು ಪಟ್ಟಿಯಿಂದ ಹೊರಗುಳಿದ ಕಾರಣ ಸುಮಾರು 14 ಅಭ್ಯರ್ಥಿಗಳು ಕರ್ನಾಟಕ ಆಡಳಿತ ನ್ಯಾಯಮಂಡಳಿಯಲ್ಲಿ ಸರ್ಕಾರದ ಸುತ್ತೋಲೆ ಸಂಖ್ಯೆ:ಸಿಆಸುಇ/3/ಹೈಕಕೋ/2019, ದಿನಾಂಕ:01-02-2023 ಅನ್ನು ಪರಿಗಣಿಸಬಾರದೆಂದು ಅರ್ಜಿ ಸಲ್ಲಿಸಿ ನೇಮಕಾತಿ ಪ್ರಕ್ರಿಯೆಗೆ ತಡೆಯಾಜ್ಞೆ ಪಡೆದಿರುತ್ತಾರೆ. ಈ ಬಗ್ಗೆ ಮಾನ್ಯ ನ್ಯಾಯಾಲಯದಲ್ಲಿ ಪ್ರಕರಣ ಬಾಕಿ ಇರುವ ಕಾರಣ ತ್ವರಿತ ವಿಲೇವಾರಿಗೆ ಕ್ರಮವಹಿಸಲಾಗುತ್ತಿದ್ದು, ಮಾನ್ಯ ನ್ಯಾಯಾಲಯದ ಆದೇಶದಂತೆ ಕ್ರಮವಹಿಸಲಾಗುವುದು.

ಇಡಿ 172 ಡಿಸಿಇ 2023

(ಡಾ: ಎಂ.ಸಿ. ಸುಧಾಕರ್)
ಉನ್ನತ ಶಿಕ್ಷಣ ಸಚಿವರು